# ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 04.08.2020 ರಂದು ಪೂರ್ವಾಹ್ನ ಗಂಟೆ 11:00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ರಾಣಿ ಅಬ್ಬಕ್ಕ (ಹೊಸ ಸೆನೆಟ್) ಸಭಾಂಗಣದಲ್ಲಿ ನಡೆದ ಶೈಕ್ಷಣಿಕ ಮಂಡಳಿಯ 2020–21ನೇ ಸಾಲಿನ ಪ್ರಥಮ ವಿಶೇಷ ಸಭೆಯ ನಡವಳಿಗಳು.**

**ಉಪಸ್ಥಿತರು**

**ಅನುಪಸ್ಥಿತರು**

**ಪ್ರಾರಂಭಿಕ**

ಪ್ರಾರಂಭದಲ್ಲಿ ಮಾನ್ಯ ಕುಲಪತಿಗಳು ಎಲ್ಲಾ ಅಧಿಕಾರಿಗಳು, ಸದಸ್ಯರುಗಳು, ವಿಶೇಷ ಆಹ್ವಾನಿತರು ಮಾಧ್ಯಮ ಮಿತ್ರರು ಮತ್ತು ಇತರರನ್ನು ಸಭೆಗೆ ಸ್ವಾಗತಿಸಿದರು.

➢ **ಸ್ವಾಗತ:**

1. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿಯಮ 2000ದ ಪ್ರಕರಣ 17ರಂತೆ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 72 ಆಸೇವ 2020 ದಿನಾಂಕ 15.04.2020 ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರಾಗಿ ನೇಮಕಗೊಂಡು ದಿನಾಂಕ 27.04.2020ರಿಂದ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀ ಕೆ. ರಾಜು ಮೊಗವೀರ, ಕೆ.ಎ.ಎಸ್. ಇವರನ್ನು ಮಾನ್ಯ ಕುಲಪತಿಗಳು ಸಭೆಗೆ ಸ್ವಾಗತಿಸಿದರು.
2. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿಯಮ 2000ದ ಪ್ರಕರಣ 18ರಂತೆ ಸರ್ಕಾರದ ಆದೇಶ ಸಂಖ್ಯೆ ಇಡಿ 9 ಯುಡಿವಿ 2020 ದಿನಾಂಕ 13.03.2020 ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರು (ಪರೀಕ್ಷಾಂಗ)ರಾಗಿ ನೇಮಕಗೊಂಡು ದಿನಾಂಕ 16.03.2020ರಿಂದ ಕರ್ತವ್ಯ ನಿರ್ವಹಿಸುತ್ತಿರುವ ಪ್ರೊ. ಪಿ. ಎಲ್. ಧರ್ಮ, ಸ್ನಾತಕೋತ್ತರ ರಾಜ್ಯಶಾಸ್ತ್ರ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರನ್ನು ಮಾನ್ಯ ಕುಲಪತಿಗಳು ಸಭೆಗೆ ಸ್ವಾಗತಿಸಿದರು.
3. ಆದೇಶ ಸಂಖ್ಯೆ ಮವಿವಿ/39/ಸಿಬ್ಬಂದಿ(3)/2020–21 ದಿನಾಂಕ 30.03.2020ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಹಣಕಾಸು ಅಧಿಕಾರಿ (ಪ್ರಭಾರ) ಆಗಿ ನೇಮಕಗೊಂಡಿರುವ ಪ್ರೊ. ಬಿ. ನಾರಾಯಣ, ಸ್ನಾತಕೋತ್ತರ ರಸಾಯನಶಾಸ್ತ್ರ ಅಧ್ಯಯನ ವಿಭಾಗ, ಇವರನ್ನು ಮಾನ್ಯ ಕುಲಪತಿಗಳು ಸಭೆಗೆ ಸ್ವಾಗತಿಸಿದರು.
4. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿಯಮ 2000ದ ಪ್ರಕರಣ 30 (1) (v) ರ ಪ್ರಕಾರ ಸರ್ಕಾರದ ಪತ್ರ ಸಂಖ್ಯೆ ಕವಿಪ/ಶಾರಶಾ/ವಿವಿನಾನಿ/63/2020 ದಿನಾಂಕ 12.06.2020ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಸದಸ್ಯರುಗಳಾಗಿ ನಾಮನಿರ್ದೇಶನಗೊಂಡಿರುವ ಈ ಕೆಳಗಿನ ವಿಧಾನ ಪರಿಷತ್ತಿನ ಸದಸ್ಯರುಗಳನ್ನು ಮಾನ್ಯ ಕುಲಪತಿಗಳು ಸಭೆಗೆ ಸ್ವಾಗತಿಸಿದರು.
   ಅ. ಶ್ರೀ ಕೆ. ಹರೀಶ್ ಕುಮಾರ್, ಮಾನ್ಯ ಶಾಸಕರು (ವಿಧಾನ ಪರಿಷತ್), ನಂ: 205, ಬಿ–ಬ್ಲಾಕ್, ಮೌರಿಷ್ಕ ಪ್ಯಾಲೇಸ್, ವ್ಯಾಸರಾವ್ ರೋಡ್, ಕದ್ರಿ ಕಂಬಳ, ಪೋಸ್ಟ್ ಕೊಡಿಯಾಲ್ ಬೈಲ್, ಮಂಗಳೂರು – 575 003 ಮತ್ತು
   ಆ. ಶ್ರೀ ಬಿ.ಎಂ. ಫಾರೂಖ್, ಮಾನ್ಯ ಶಾಸಕರು (ವಿಧಾನ ಪರಿಷತ್), ನಂ: 8–112(1), ಕಾಟಿಪಳ್ಳ, 8ನೇ ಬ್ಲಾಕ್, ಮಂಗಳೂರು – 575 030.
5. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000 ದ ಪ್ರಕರಣ 30(1) (ix) ರ ಪ್ರಕಾರ ಡೀನರ ನೆಲೆಯಲ್ಲಿ ಶೈಕ್ಷಣಿಕ ಮಂಡಳಿ ಸದಸ್ಯರಾಗಿ ನಾಮನಿರ್ದೇಶನಗೊಂಡಿರುವ ಪ್ರೊ. ಬಿ. ಉದಯ, ಡೀನರು, ಕಲಾ ನಿಕಾಯ, ಮಂಗಳೂರು ವಿಶ್ವವಿದ್ಯಾನಿಲಯ ಇವರನ್ನು ಮಾನ್ಯ ಕುಲಪತಿಗಳು ಸಭೆಗೆ ಸ್ವಾಗತಿಸಿದರು.
6. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000 ದ ಪ್ರಕರಣ 30(1) (vi) ರ ಪ್ರಕಾರ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಶೈಕ್ಷಣಿಕ ಮಂಡಳಿ ಸದಸ್ಯರಾಗಿ ಮಾನ್ಯ ಕುಲಪತಿಗಳಿಂದ ನಾಮನಿರ್ದೇಶನಗೊಂಡಿರುವ ಡಾ. ಶಂಕರ್ ಭಟ್, ಪ್ರಾಂಶುಪಾಲರು, ಸರಕಾರಿ ಪ್ರಥಮ ದರ್ಜೆ ಕಾಲೇಜು, ಕನ್ಯಾನ ಇವರನ್ನು ಮಾನ್ಯ ಕುಲಪತಿಗಳು ಸಭೆಗೆ ಸ್ವಾಗತಿಸಿದರು.
7. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000 ದ ಪ್ರಕರಣ 30(1) (xv) ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಕಾಲೇಜು ಅಭಿವೃದ್ಧಿ ಮಂಡಳಿ ನಿರ್ದೇಶಕರ ನೆಲೆಯಲ್ಲಿ ಶೈಕ್ಷಣಿಕ ಮಂಡಳಿ ಸದಸ್ಯರಾಗಿ ನಾಮನಿರ್ದೇಶನಗೊಂಡಿರುವ ಪ್ರೊ. ಕಿಶೋರಿ ನಾಯಕ್ ಕೆ., ಪ್ರಾಧ್ಯಾಪಕರು, ಸ್ನಾತಕೋತ್ತರ ಆಂಗ್ಲ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರನ್ನು ಮಾನ್ಯ ಕುಲಪತಿಗಳು ಸಭೆಗೆ ಸ್ವಾಗತಿಸಿದರು.

- **ಕೃತಜ್ಞತೆ:**

1. ದಿನಾಂಕ 14.08.2018ರಿಂದ ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರಾಗಿದ್ದ ಪ್ರೊ. ಎ. ಎಂ. ಖಾನ್, ಪ್ರಾಧ್ಯಾಪಕರು, ಸ್ನಾತಕೋತ್ತರ ಇಲೆಕ್ಟ್ರಾನಿಕ್ಸ್ ಅಧ್ಯಯನ ವಿಭಾಗ ಇವರನ್ನು ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 72 ಆಸೇವ 2020 ದಿನಾಂಕ 15.04.2020ರಂತೆ ಕುಲಸಚಿವರ ಕರ್ತವ್ಯದಿಂದ ಬಿಡುಗಡೆಗೊಳಿಸಲಾಗಿದೆ.
2. ದಿನಾಂಕ 14.08.2018ರಿಂದ ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರು (ಪರೀಕ್ಷಾಂಗ)ರಾಗಿದ್ದ ಪ್ರೊ. ವಿ. ರವೀಂದ್ರಾಚಾರಿ, ಪ್ರಾಧ್ಯಾಪಕರು, ಸ್ನಾತಕೋತ್ತರ ಭೌತಶಾಸ್ತ್ರ ಅಧ್ಯಯನ ವಿಭಾಗ ಇವರನ್ನು ಸರ್ಕಾರದ ಆದೇಶ ಸಂಖ್ಯೆ ಇಡಿ 9 ಯುಡಿವಿ 2020 ದಿನಾಂಕ 13.03.2020 ರಂತೆ ಕುಲಸಚಿವರು(ಪರೀಕ್ಷಾಂಗ) ಕರ್ತವ್ಯದಿಂದ ಬಿಡುಗಡೆಗೊಳಿಸಲಾಗಿದೆ.
3. ದಿನಾಂಕ 01.07.2019ರಿಂದ ಮಂಗಳೂರು ವಿಶ್ವವಿದ್ಯಾನಿಲಯದ ಹಣಕಾಸು ಅಧಿಕಾರಿ (ಪ್ರಭಾರ) ಆಗಿ ಕರ್ತವ್ಯ ನಿರ್ವಹಿಸುತ್ತಿದ್ದ ಪ್ರೊ. ಶ್ರೀಪತಿ ಕಲ್ಲೂರಾಯ ಪಿ., ಪ್ರಾಧ್ಯಾಪಕರು, ಸ್ನಾತಕೋತ್ತರ ಅರ್ಥಶಾಸ್ತ್ರ ಅಧ್ಯಯನ ವಿಭಾಗ ಇವರು ಸೇವಾ ವಯೋನಿವೃತ್ತಿ ಹೊಂದಿರುವುದರಿಂದ ಇವರನ್ನು ಕುಲಸಚಿವರ ಆದೇಶ ಸಂಖ್ಯೆ ಮವಿವಿ/39/ಸಿಬ್ಬಂದಿ(3)/2020–21 ದಿನಾಂಕ 30.03.2020ರಂತೆ ಹಣಕಾಸು ಅಧಿಕಾರಿ (ಪ್ರಭಾರ)ದ ಕರ್ತವ್ಯದಿಂದ ಬಿಡುಗಡೆಗೊಳಿಸಲಾಗಿದೆ.
4. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000 ದ ಪ್ರಕರಣ 30(1) (vi) ರ ಪ್ರಕಾರ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಶೈಕ್ಷಣಿಕ ಮಂಡಳಿ ಸದಸ್ಯರಾಗಿ ಮಾನ್ಯ ಕುಲಪತಿಗಳಿಂದ ನಾಮನಿರ್ದೇಶನಗೊಂಡಿದ್ದ ಡಾ. ಎನ್. ಪಿ. ನಾರಾಯಣ ಶೆಟ್ಟಿ, ಪ್ರಾಂಶುಪಾಲರು, ಭಂಡಾರ್‌ಕಾರ್ಸ್ ಆರ್ಟ್ಸ್ ಆ್ಯಂಡ್ ಸಾಯನ್ಸ್ ಕಾಲೇಜು, ಕುಂದಾಪುರ ಇವರ ಶೈಕ್ಷಣಿಕ ಮಂಡಳಿ ಸದಸ್ಯತ್ವದ ಅವಧಿಯು ದಿನಾಂಕ 31.07.2020ರಂದು ಕೊನೆಗೊಂಡಿರುವುದರಿಂದ ಸದರಿಯವರನ್ನು ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

ಇವರೆಲ್ಲರೂ ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುವುದಕ್ಕೆ ಶೈಕ್ಷಣಿಕ ಮಂಡಳಿ ಸಭೆಯಲ್ಲಿ ಸರ್ವರಿಗೂ ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು.

**ಪ್ರಾಸ್ತಾವಿಕ**

ಮಾನ್ಯ ಕುಲಪತಿಗಳು ಪ್ರಾಸ್ತಾವಿಕವಾಗಿ ಮಾತನಾಡುತ್ತಾ COVID -19 ರ ಈ ಸಂದಿಗ್ಧ ಪರಿಸ್ಥಿತಿಯಲ್ಲಿ ಎಲ್ಲರೂ ತಾಳ್ಮೆಯಿಂದ ಇದ್ದು ವಿಚಲಿತರಾಗದೆ ತಮ್ಮ ಆರೋಗ್ಯ, ತಮ್ಮ ಸಮಾಜದ ಆರೋಗ್ಯವನ್ನು ಕಾಪಾಡಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯ ಹಾಗೂ ಒದಗಿರುವ ಪರಿಸ್ಥಿತಿಗೆ ಅನುಗುಣವಾಗಿ ನಮ್ಮ ಮನೋಬಲವನ್ನು ದೃಢಪಡಿಸಿಕೊಳ್ಳಬೇಕೆಂಬ ಆಶಯವನ್ನು ವ್ಯಕ್ತಪಡಿಸಿದರು.

1. ವಿಶ್ವವಿದ್ಯಾನಿಲಯದ ಅನುದಾನ ಆಯೋಗಗಳು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಕರ್ನಾಟಕ ಸರ್ಕಾರ, ಕುಲಪತಿಗಳ ಸಮಿತಿಗಳು ವಿವಿಧ ಹಂತಗಳಲ್ಲಿ ನಡೆಸಿದ ಸಭೆಗಳ ನಿರ್ಣಯಗಳಂತೆ ಪ್ರಸ್ತುತ ಶೈಕ್ಷಣಿಕ ವರ್ಷದಲ್ಲಿ ಅಂತಿಮ ವರ್ಷದಲ್ಲಿರುವ ಪದವಿ ಮಟ್ಟದ ಆರನೇ ಸೆಮೆಸ್ಟರ್ ಮತ್ತು ಸ್ನಾತಕೋತ್ತರ ಪದವಿಯ ನಾಲ್ಕನೇ ಸೆಮೆಸ್ಟರ್ ವಿದ್ಯಾರ್ಥಿಗಳಿಗೆ ಪರೀಕ್ಷೆಗಳನ್ನು ನಡೆಸಲಾಗುವುದೆಂದು ಸಭೆಗೆ ತಿಳಿಸಿದರು.
2. ಹಲವಾರು ವಿದ್ಯಾರ್ಥಿ ಸಂಘಟನೆಗಳು ಪರೀಕ್ಷೆ ಬೇಡ ಎಂದು ಬೇಡಿಕೆ ಸಲ್ಲಿಸಿದ್ದರೂ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯದ ಹಿತದೃಷ್ಟಿಯಿಂದ ಸರ್ಕಾರದ ನಿರ್ದೇಶನದಂತೆ ಕೊನೆಯ ಸೆಮೆಸ್ಟರ್ ಪರೀಕ್ಷೆಗಳನ್ನು ನಡೆಸಬೇಕಾಗಿದೆ. ಇದಕ್ಕಾಗಿ ಎಲ್ಲರ ಪೂರ್ಣ ಸಹಕಾರವನ್ನು ಕೋರಿದರು.
3. ಪದವಿ ಹಾಗೂ ಸ್ನಾತಕೋತ್ತರ ಅಂತಿಮ ಸೆಮೆಸ್ಟರ್‌ಗಳ ಪರೀಕ್ಷೆಗಳನ್ನು ಸೆಪ್ಟೆಂಬರ್ 2020 ಕೊನೆಯೊಳಗಾಗಿ ಮುಗಿಸಬೇಕಾಗಿದೆ. ಈ ಬಗ್ಗೆ ಈಗಾಗಲೇ ಕರಡು ವೇಳಾಪಟ್ಟಿಯನ್ನು ತಯಾರಿಸಲಾಗಿದೆ ಎಂದು ತಿಳಿಸಿದರು. ಕೊನೆಯ ಸೆಮೆಸ್ಟರ್‌ನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಯಾವುದೇ ಸೆಮೆಸ್ಟರ್‌ನ ಹಿಂಬಾಕಿ ಇದ್ದರೂ ಕೂಡ ಅದನ್ನು ಈ ಸಂದರ್ಭದಲ್ಲಿ ಬರೆಯಲು ಅವಕಾಶ ಕಲ್ಪಿಸಲಾಗುವುದು ಎಂದು ತಿಳಿಸಿದರು.
4. ಯಾವುದೇ ವಿದ್ಯಾರ್ಥಿಗೆ ಈ ಸಂದರ್ಭದಲ್ಲಿ ಪರೀಕ್ಷೆ ಬರೆಯಲು ತೊಂದರೆಯಾದಲ್ಲಿ ಮುಂದೆ ಪರಿಸ್ಥಿತಿಯ ಸುಧಾರಣೆಯ ನಂತರ ವಿಶೇಷ ನೆಲೆಯಲ್ಲಿ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಲಾಗುವುದು ಎಂದು ತಿಳಿಸಿದರು.
5. ಈಗಾಗಲೇ ಎಂ.ಬಿ.ಎ. ವಿಭಾಗದ 6000 ಉತ್ತರ ಪತ್ರಿಕೆಗಳನ್ನು ಡಿಜಿಟಲ್ ಮೌಲ್ಯಮಾಪನದ ಮೂಲಕ ಮೌಲ್ಯಮಾಪನ ಮಾಡಿರುವುದರಿಂದ ಪ್ರಸ್ತುತ ಸಂದರ್ಭದಲ್ಲಿ ಮೂರು ಜಿಲ್ಲೆಗಳಲ್ಲಿ ಪರೀಕ್ಷಾ ಕೇಂದ್ರಗಳನ್ನು ನಿಗದಿಪಡಿಸಿ, ಡಿಜಿಟಲ್ ಮೌಲ್ಯಮಾಪನದ ವ್ಯವಸ್ಥೆಯ ಬಗ್ಗೆ ಪರಿಶೀಲಿಸಲಾಗುವುದು ಎಂದು ತಿಳಿಸಿದರು.
6. ಪರೀಕ್ಷೆಗೆ ಪೂರ್ವ ತಯಾರಿಯಾಗಿ ಪ್ರತಿಯೊಂದು ಶಿಕ್ಷಕರು ಕನಿಷ್ಠ ಒಂದು ವಾರ online ಅಥವಾ offline ಮೂಲಕ ವಿದ್ಯಾರ್ಥಿಗಳಿಗೆ ಈಗಾಗಲೇ ಪೂರ್ಣಗೊಂಡಿರುವ ಪಾಠಗಳನ್ನು ಪುನರ್‌ಮನನ ಮಾಡಲು ಕ್ರಮಕೈಗೊಳ್ಳಬೇಕಾಗಿ ತಿಳಿಸಿದರು.

7. ಈ ಸಂದರ್ಭದಲ್ಲಿ ಶಿಕ್ಷಕರ ಪಾತ್ರ ಪ್ರಮುಖವಾಗಿದ್ದು ವಿದ್ಯಾರ್ಥಿಗಳೊಂದಿಗೆ ಆಪ್ತ ಸಮಾಲೋಚನೆಯನ್ನು ನಡೆಸಿ, ವಿದ್ಯಾರ್ಥಿಗಳ ಮನೋಬಲವನ್ನು ಬಲಪಡಿಸಬೇಕಾಗಿದೆ ಎಂದು ತಿಳಿಸಿದರು.
8. ಒಂದು ವೇಳೆ ಸರ್ಕಾರ ಅಥವಾ ಕೋರ್ಟು ಮೂಲಕ ನಿರ್ದೇಶನಗಳು ಬಂದಲ್ಲಿ ವೇಳಾಪಟ್ಟಿಯನ್ನು ಬದಲಾವಣೆಗೊಳಿಸಲಾಗುವುದು ಎಂದು ತಿಳಿಸಿದರು.
9. ಶೈಕ್ಷಣಿಕ ವರ್ಷ 2020–21ನೇ ಸಾಲಿನ ಶೈಕ್ಷಣಿಕ ತಾತ್ಕಾಲಿಕ ವೇಳಾಪಟ್ಟಿಯನ್ನು ಈಗಾಗಲೇ ಬಿಡುಗಡೆಗೊಳಿಸಲಾಗಿದೆ. ಅದರಂತೆ ಸೆಪ್ಟೆಂಬರ್ 1 ರಿಂದ ತರಗತಿಗಳು online ಮೂಲಕ ಪ್ರಾರಂಭವಾಗಲಿವೆ ಎಂದು ತಿಳಿಸಿದರು.
**10. "National Educational Policy 2020"** ಯನ್ನು ಬಿಡುಗಡೆ ಮಾಡಿದ್ದಕ್ಕಾಗಿ ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವರಾದ ಡಾ. ರಮೇಶ್ ಪೋಕ್ರಿಯಾಲ್ ನಿಶಾಂಕ್ ಇವರಿಗೆ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿ ಸಭೆಯ ಪರವಾಗಿ ಅಭಿನಂದನೆಗಳನ್ನು ಸಲ್ಲಿಸಲಾಯಿತು.
11. ಮುಂಬರುವ ದಿನಗಳಲ್ಲಿ ಎಲ್ಲಾ ಕೋರ್ಸುಗಳಲ್ಲಿ ಪ್ರಾಯೋಗಿಕ ತರಗತಿಗಳೊಂದಿಗೆ ಬೋಧನಾ ಕ್ರಮವನ್ನು ಅಳವಡಿಸಿಕೊಳ್ಳಲಾಗುವುದು ಇದರಿಂದ ವಿದ್ಯಾರ್ಥಿಗಳ ಚಾಕಚಕ್ಯತೆಯ ಬೆಳವಣಿಗೆಯಾಗುತ್ತದೆ.
12. ಕಾಲೇಜಿನ ಶಿಕ್ಷಕರು ಸಮಯೋಚಿತವಾಗಿ Webinarಗಳಲ್ಲಿ ಕಡ್ಡಾಯವಾಗಿ ಭಾಗವಹಿಸಬೇಕು. ಕಾಲೇಜುಗಳ ಪ್ರತಿಯೊಬ್ಬ ಶಿಕ್ಷಕರು 25–30 ನಿಮಿಷಗಳ ತಮ್ಮದೇ ಆಯ್ಕೆಯ ವಿಷಯದ ಮೇಲೆ video ಗಳನ್ನು ತಯಾರಿಸಿ ತಮ್ಮ ಕಾಲೇಜಿನ website ಗೆ upload ಮಾಡಬೇಕೆಂದು ತಿಳಿಸಿದರು.
13. ಒಬ್ಬ ಶಿಕ್ಷಕರು ಕನಿಷ್ಠ 10 ವಿದ್ಯಾರ್ಥಿಗಳಿಗೆ e-mail, whatsapp, ಅಥವಾ ಇನ್ನಾವುದೇ mode ಗಳ ಮುಖಾಂತರ ಸಂಪರ್ಕಿಸಿ ಮಾರ್ಗದರ್ಶನ ನೀಡಿದಲ್ಲಿ ವಿದ್ಯಾರ್ಥಿಗಳಿಗೆ ಅನುಕೂಲವಾಗುವುದು ಎಂದು ತಿಳಿಸಿದರು.
14. ಪ್ರಸ್ತುತ ಸಾಲಿನಲ್ಲಿ ಪ್ರಥಮ ಬಾರಿಗೆ ಕಾಲೇಜುಗಳ ಸಂಯೋಜನೆಗೆ ಅರ್ಜಿಗಳನ್ನು online ಮೂಲಕವೂ ಸಲ್ಲಿಸಲು ಅವಕಾಶವಿರುತ್ತದೆ. ಆದರೆ ಇದು ಪ್ರಥಮ ಪ್ರಯೋಗವಾಗಿರುವುದರಿಂದ online ಮತ್ತು offline mode ಎರಡರಲ್ಲೂ ಅರ್ಜಿಗಳನ್ನು ಸಲ್ಲಿಸಬಹುದಾಗಿರುತ್ತದೆ.
15. ಶೀಘ್ರವೇ ಸಿಂಡಿಕೇಟು ಸದಸ್ಯರನ್ನೊಳಗೊಂಡ ಸ್ಥಳೀಯ ವಿಚಾರಣಾ ಸಮಿತಿಯು ಕಾಲೇಜುಗಳಿಗೆ ಭೇಟಿ ನೀಡುವುದಾಗಿ ತಿಳಿಸಿದರು.
16. ವಿದ್ಯಾರ್ಥಿಗಳ ಪ್ರಾಯೋಗಿಕ ಪರೀಕ್ಷೆಗಳಿಗೆ ಸಂಬಂಧಿಸಿ, ವಿದ್ಯಾರ್ಥಿಗಳ ಆರೋಗ್ಯ ಮತ್ತು ಶೈಕ್ಷಣಿಕ ಭವಿಷ್ಯದ ಹಿತದೃಷ್ಟಿಯಿಂದ ಪ್ರಾಯೋಗಿಕ ಪರೀಕ್ಷೆಗಳಿಗೆ ಬದಲಿ ವ್ಯವಸ್ಥೆಯನ್ನು ಕಾಲೇಜು/ವಿಭಾಗಗಳಿಂದಲೇ ಮಾಡಲು ಸಂಬಂಧಿತರಿಗೆ ತಿಳಿಸಲು ಕ್ರಮಕೈಗೊಳ್ಳುವುದಾಗಿ ತಿಳಿಸಿದರು.
17. ಹಾಜರಾತಿ ಕೊರತೆಯಿದ್ದಲ್ಲಿ COVOD -19 ರ Lockdown ಸಂದರ್ಭವನ್ನು Deemed to be attended ಎಂದು ಪರಿಗಣಿಸಲು ಕ್ರಮಕೈಗೊಳ್ಳುವುದಾಗಿ ತಿಳಿಸಿದರು. ವಿದ್ಯಾರ್ಥಿಗಳ ಹಾಜರಾತಿ ಮತ್ತು ಆಂತರಿಕ ಪರೀಕ್ಷೆಗಳ ಅಂಕಗಳನ್ನು ಸಂಬಂಧಿತ ಕಾಲೇಜು/ವಿಭಾಗವೇ ನೀಡಬೇಕಾಗಿ ತಿಳಿಸಿದರು.
18. ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯದ ಹಿತದೃಷ್ಟಿಯಿಂದ ಪ್ರಸ್ತುತ ಪರೀಕ್ಷೆ ನಡೆಸಬೇಕಾಗಿದೆ. ಪರೀಕ್ಷೆಗೆ ಹಾಜರಾಗುವ ಬಗ್ಗೆ ವಿದ್ಯಾರ್ಥಿಯೇ ನಿರ್ಧರಿಸಬೇಕು. ಪ್ರಸ್ತುತ ನಡೆಸಲ್ಪಡುವ ಪರೀಕ್ಷೆಗೆ ಹಾಜರಾಗಲು ವಿದ್ಯಾರ್ಥಿಗೆ ಸಹಮತವಿಲ್ಲದಿದ್ದಲ್ಲಿ ಆತನು ಮುಂದೆ ಪರಿಸ್ಥಿತಿ ಸುಧಾರಣೆಯಾಗಿ ಒಂದು ಹಂತಕ್ಕೆ ಬಂದ ನಂತರ ವಿಶ್ವವಿದ್ಯಾನಿಲಯದಿಂದ ನಡೆಸುವ ಪರೀಕ್ಷೆಗೆ ಹಾಜರಾಗಲು ಅನುಕೂಲ ಮಾಡಿಕೊಡಲು ಕ್ರಮಕೈಗೊಳ್ಳುವುದಾಗಿ ತಿಳಿಸಿದರು.
19. ಈ ಸಂದರ್ಭದಲ್ಲಿ ಈ ಸೆಮೆಸ್ಟರ್ ಪರೀಕ್ಷೆಗೆ ಮಾತ್ರ ಅನ್ವಯವಾಗುವಂತೆ ವಿದ್ಯಾರ್ಥಿಗಳಿಗೆ ಸ್ವಂತ ಸ್ಥಳದಿಂದ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸುವುದಾಗಿ ತಿಳಿಸಿದರು. ವಿದ್ಯಾರ್ಥಿಯು ವಾಸವಾಗಿರುವ ಪ್ರದೇಶದ ಸಮೀಪದ ವಿಶ್ವವಿದ್ಯಾನಿಲಯದೊಂದಿಗೆ ವ್ಯವಹರಿಸಿ ವಿದ್ಯಾರ್ಥಿ ಮತ್ತು ವಿಶ್ವವಿದ್ಯಾನಿಲಯದ ಅನುಮತಿಯೊಂದಿಗೆ ಸದರಿ ವಿಶ್ವವಿದ್ಯಾನಿಲಯದಲ್ಲಿ ವಿದ್ಯಾರ್ಥಿಗಳಿಗೆ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಲಾಗುವುದು ಎಂದು ತಿಳಿಸಿದರು.

20. ಈ ಎಲ್ಲಾ ವಿಷಯಗಳ ಬಗ್ಗೆ ವಿಶ್ವವಿದ್ಯಾನಿಲಯದ ಕುಲಪತಿಗಳು, ಕುಲಸಚಿವರು, ಕುಲಸಚಿವರು(ಪರೀಕ್ಷಾಂಗ) ಇವರುಗಳು ಈಗಾಗಲೇ ಹಲವಾರು ಮಾಧ್ಯಮಗಳ ಮೂಲಕ ವಿದ್ಯಾರ್ಥಿಗಳಿಗೆ ಮಾನಸಿಕ ಧೈರ್ಯ ತುಂಬಿರುವ ವಿಷಯವನ್ನು ಕೂಡ ಸಭೆಗೆ ತಿಳಿಸಿದರು.

21. ವಿಶ್ವವಿದ್ಯಾನಿಲಯದಿಂದ ಈಗಾಗಲೇ ಅಕ್ಕಪಕ್ಕದ ಸರಕಾರಿ ಶಾಲೆಗಳಿಗೆ ನೀಡಿರುವ ಅನೇಕ ರೀತಿಯ ಸಹಾಯಗಳನ್ನು ನೆನಪಿಸಿಕೊಳ್ಳುತ್ತಾ, ಇನ್ನು ಮುಂದೆಯೂ ಬಡ ಹಿಂದುಳಿದ ವಿದ್ಯಾರ್ಥಿಗಳಿಗೆ ಮತ್ತು ಶಾಲೆಗಳಿಗೆ ವಿಶ್ವವಿದ್ಯಾನಿಲಯದಿಂದ ನೀಡಬಹುದಾದ ಸಹಾಯಗಳನ್ನು ಮಾಡುವುದಾಗಿ ತಿಳಿಸಿದರು. ಅಕ್ಕ ಪಕ್ಕದ 10 ಶಾಲೆಗಳನ್ನು ದತ್ತು ಪಡೆದುಕೊಳ್ಳುವ ವಿಷಯದ ಬಗ್ಗೆ ಪ್ರಸ್ತಾವಿಸಿದರು.

**ಮುಂದಕ್ಕೆ ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳ ಬಗ್ಗೆ ಚರ್ಚಿಸಲಾಯಿತು.**

1. ದಿನಾಂಕ 03.02.2020ರಂದು ನಡೆದ ಶೈಕ್ಷಣಿಕ ಮಂಡಳಿಯ 2019–20ನೇ ಸಾಲಿನ ಪ್ರಥಮ ವಿಶೇಷ ಸಭೆಯ ನಡವಳಿಯ ದೃಢೀಕರಣ.

   **– ದೃಢೀಕರಿಸಲಾಯಿತು. –**

2. ದಿನಾಂಕ 27.02.2020 ರಂದು ನಡೆದ ಶೈಕ್ಷಣಿಕ ಮಂಡಳಿಯ 2019–20ನೇ ಸಾಲಿನ ದ್ವಿತೀಯ ವಿಶೇಷ ಸಭೆ (ಘಟಿಕೋತ್ಸವ)ಯ ನಡವಳಿಯ ದೃಢೀಕರಣ.

   **– ದೃಢೀಕರಿಸಲಾಯಿತು. –**

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ:ಶೈ.ಮ.ವಿ.ಸ.1:01 (2020–21)**

**ವಿಷಯ:** ಮಂಗಳೂರಿನ ಬೊಂದೆಲ್‌ನಲ್ಲಿರುವ ಮಣೇಲ್ ಶ್ರೀನಿವಾಸ್ ನಾಯಕ್ ಮೆಮೋರಿಯಲ್ ಬೆಸೆಂಟ್ ಇನ್ಸ್ಟಿಟ್ಯೂಟ್ ಆಫ್ ಪೋಸ್ಟ್ ಗ್ರಾಜುಯೇಟ್ ಸ್ಟಡೀಸ್ ಎಂಬ ಕಾಲೇಜಿನ ಹೆಸರನ್ನು ಮಣೇಲ್ ಶ್ರೀನಿವಾಸ್ ನಾಯಕ್ ಇನ್ಸ್ಟಿಟ್ಯೂಟ್ ಆಫ್ ಮೆನೇಜ್‌ಮೆಂಟ್ ಎಂದು ಬದಲಾಯಿಸುವ ಕುರಿತು.

**ನಿರ್ಣಯ:** ಸದರಿ ವಿದ್ಯಾಸಂಸ್ಥೆಯ ಹೆಸರನ್ನು "ಮಣೇಲ್ ಶ್ರೀನಿವಾಸ್ ನಾಯಕ್ ಇನ್ಸ್ಟಿಟ್ಯೂಟ್ ಆಫ್ ಮೆನೇಜ್‌ಮೆಂಟ್" ಎಂದು ಬದಲಾವಣೆ ಮಾಡುವ ಪ್ರಸ್ತಾವನೆಯನ್ನು ಪರಿಗಣಿಸಿ ಸಿಂಡಿಕೇಟಿಗೆ ಶಿಫಾರಸ್ಸು ಮಾಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ:ಶೈ.ವಿ.ಸ.1:02 (2020–21)**

**ವಿಷಯ:** ಡಾ. ಎಂ.ವಿ. ಶೆಟ್ಟಿ ಕಾಲೇಜ್ ಆಫ್ ಸೋಶಿಯಲ್ ವರ್ಕ್, ಮಂಗಳೂರು ವಿದ್ಯಾಸಂಸ್ಥೆಯ ಹೆಸರು ಬದಲಾವಣೆ ಕುರಿತು.

**ನಿರ್ಣಯ:** ಸದರಿ ವಿದ್ಯಾಸಂಸ್ಥೆಯ ಹೆಸರನ್ನು "ಡಾ. ಎಂ. ವಿ. ಶೆಟ್ಟಿ ಇನ್ಸ್ಟಿಟ್ಯೂಟ್ ಆಫ್ ಪ್ರೊಫೆಷನಲ್ ಸಾಯನ್ಸ್ ಆಂಡ್ ಮೆನೇಜ್‌ಮೆಂಟ್" ಎಂದು ಬದಲಾವಣೆ ಮಾಡುವ ಪ್ರಸ್ತಾವನೆಯನ್ನು ಪರಿಗಣಿಸಿ ಸಿಂಡಿಕೇಟಿಗೆ ಶಿಫಾರಸ್ಸು ಮಾಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಪರೀಕ್ಷಾಂಗ:ಶೈ.ವಿ.ಸ.1:03 (2020–21)**

**ವಿಷಯ:** ಶ್ರೀ. ಸತೀಶ್‌ಕುಮಾರ್ ಕೆ., ಕಾನೂನು ಪದವಿಯ ವಿದ್ಯಾರ್ಥಿ, ವೈಕುಂಠ ಬಾಳಿಗ ಕಾನೂನು ಮಹಾವಿದ್ಯಾನಿಲಯ, ಉಡುಪಿ, ಇವರ ಅಂಕಪಟ್ಟಿ ತಿದ್ದುಪಡಿ ಮಾಡುವ ಬಗ್ಗೆ.

**ನಿರ್ಣಯ:** ಈ ಬಗ್ಗೆ ವಿಸ್ತೃತವಾಗಿ ಚರ್ಚಿಸಿ, ಇದನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ, ಸದರಿ ವಿದ್ಯಾರ್ಥಿಯ ಆಂತರಿಕ ಅಂಕಗಳನ್ನು ಅಂಕಪಟ್ಟಿಯಲ್ಲಿ ನಮೂದಿಸಿ ಅಂಕಪಟ್ಟಿಯನ್ನು ನೀಡುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಹವಿ:ಶೈ.ವಿ.ಸ.1:04 (2020–21)**

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ 2020–21ನೇ ಸಾಲಿನ ಆಯವ್ಯಯ ಅಂದಾಜುಗಳು ಮತ್ತು 2019–20ನೇ ಸಾಲಿನ ಪರಿಷ್ಕೃತ ಆಯವ್ಯಯ ಅಂದಾಜುಗಳ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ:ಶೈ.ಮ.ವಿ.ಸ.1:05 (2020–21)**

**ವಿಷಯ:** ದಿನಾಂಕ 01.01.2016ರ ಪರಿಷ್ಕೃತ ಯುಜಿಸಿ 7ನೇ ವೇತನಶ್ರೇಣಿ/ಸಂಬಂಧಿಸಿದ ಆದೇಶಗಳನ್ವಯ ಪರಿಷ್ಕೃತ ವೇತನಶ್ರೇಣಿಯ ವಿವಿಧ ಸೌಲಭ್ಯಗಳನ್ನು ವಿಸ್ತರಿಸಲು ರಚಿಸಿದ ಕರಡು ಪರಿನಿಯಮ/ಅನುಶಾಸನವನ್ನು ತಿದ್ದುಪಡಿ ಮಾಡಿ ಅನುಮೋದಿಸುವ ಬಗ್ಗೆ.

**ನಿರ್ಣಯ:** ಕರಡು ಪರಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ:ಶೈ.ಮ.ವಿ.ಸ.1:06 (2020–21)**

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಹಿರಿಯ ಸಹಾಯಕ ಹುದ್ದೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ನಿಯಂತ್ರಿಸುವ ತಿದ್ದುಪಡಿ ಪರಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ಸಿಂಡಿಕೇಟು ಮತ್ತು ಹಣಕಾಸು ಸಮಿತಿಗಳಲ್ಲಿ ಅನುಮೋದನೆಗೊಂಡಿರುವ ತಿದ್ದುಪಡಿ ಪರಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ:ಶೈ.ಮ.ವಿ.ಸ.1:07 (2020–21)**

**ವಿಷಯ:** ಸಂಯೋಜಿತ/ಸ್ವಾಯತ್ತ ಕಾಲೇಜುಗಳಲ್ಲಿ ನಡೆಸಲ್ಪಡುವ ಸ್ನಾತಕ/ಸ್ನಾತಕೋತ್ತರ ಕೋರ್ಸುಗಳಿಗೆ ಹೆಚ್ಚುವರಿ ವಿದ್ಯಾರ್ಥಿ ಪರಿಮಿತಿ ಮಂಜೂರು ಮಾಡುವ ಬಗ್ಗೆ.

**ನಿರ್ಣಯ:** ಈ ಶೈಕ್ಷಣಿಕ ವರ್ಷಕ್ಕೆ ಅನ್ವಯವಾಗುವಂತೆ ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜಿತ / ಸ್ವಾಯತ್ತ ಕಾಲೇಜುಗಳಲ್ಲಿ ನಡೆಸಲ್ಪಡುವ ಎಲ್ಲಾ ಸ್ನಾತಕ ಕಾರ್ಯಕ್ರಮಗಳಿಗೆ (Except BHM, BASLP, B.Ed.) ಸಂಸ್ಥೆಯ ಪ್ರಾಂಶುಪಾಲರುಗಳು ಹೆಚ್ಚುವರಿ ವಿದ್ಯಾರ್ಥಿ ಪರಿಮಿತಿಗೆ ಅರ್ಜಿ ಸಲ್ಲಿಸಿದಲ್ಲಿ ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ಕಾರ್ಯಕ್ರಮದ ಗರಿಷ್ಠ ವಿದ್ಯಾರ್ಥಿ ಪರಿಮಿತಿಯ 10% ಹೆಚ್ಚುವರಿ ವಿದ್ಯಾರ್ಥಿ ಪರಿಮಿತಿಗೆ ಅನುಮತಿ ನೀಡಬಹುದೆಂಬುದಾಗಿ ಮತ್ತು ಹೆಚ್ಚುವರಿ ವಿಭಾಗಕ್ಕೆ ಅನುಮತಿ ಕೋರಿದಲ್ಲಿ ಸಂಸ್ಥೆಯ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಿ, ಸಮಿತಿಯನ್ನು ಕಳುಹಿಸಿ ಸಮಿತಿಯ ವರದಿಯ ಆಧಾರದ ಮೇರೆಗೆ ಅನುಮತಿ ನೀಡಬಹುದೆಂಬುದಾಗಿ ನಿರ್ಣಯಿಸಿ ಪ್ರಸ್ತಾವನೆಯನ್ನು ಸಿಂಡಿಕೇಟಿಗೆ ಶಿಫಾರಸ್ಸು ಮಾಡಲಾಯಿತು.

ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜಿತ/ಸ್ವಾಯತ್ತ ಕಾಲೇಜುಗಳಲ್ಲಿ ನಡೆಸಲ್ಪಡುತ್ತಿರುವ ಸ್ನಾತಕೋತ್ತರ ಕಾರ್ಯಕ್ರಮಗಳ ಹೆಚ್ಚುವರಿ ವಿದ್ಯಾರ್ಥಿ ಪರಿಮಿತಿಗೆ ಸಂಬಂಧಿಸಿ, ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 59(18)ರ ಪ್ರಕಾರ ಸ್ನಾತಕೋತ್ತರ ಕಾರ್ಯಕ್ರಮಗಳ ಹೆಚ್ಚುವರಿ ವಿದ್ಯಾರ್ಥಿ ಪರಿಮಿತಿ ಪ್ರವೇಶಾತಿಗೆ ಅನುಮತಿ ನೀಡಲು ಅವಕಾಶವಿಲ್ಲದಿರುವುದರಿಂದ ಅನುಮತಿ ನೀಡುವುದು ಸಮಂಜಸವಲ್ಲವೆಂದು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ:ಶೈ.ಮ.ವಿ.ಸ.1:08 (2020–21)**

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ Bachelor in Audiology and Speech Language Pathology (BASLP) ಕಾರ್ಯಕ್ರಮವನ್ನು ಮುಂದುವರಿಸುವ ಬಗ್ಗೆ.

**ನಿರ್ಣಯ:** ಈ ಬಗ್ಗೆ ವಿಸ್ತೃತವಾಗಿ ಚರ್ಚಿಸಲಾಯಿತು.

ಸದಸ್ಯರುಗಳಾದ ಡಾ. ಭರತ್ ಶೆಟ್ಟಿ, ಮಾನ್ಯ ಶಾಸಕರು ಮತ್ತು ಶ್ರೀ ಲಾಲಾಜಿ ಮೆಂಡನ್, ಮಾನ್ಯ ಶಾಸಕರು ಇವರುಗಳು BASLP ಕಾರ್ಯಕ್ರಮವನ್ನು ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಮುಂದುವರಿಸುವ ಬಗ್ಗೆ ತಮ್ಮ ಸಹಮತವಿರುವುದಿಲ್ಲ ಎಂದು ತಿಳಿಸಿದರು. ಮುಂದುವರಿದು, ಸದರಿ ಕಾರ್ಯಕ್ರಮದ ಉನ್ನತೀಕರಣಕ್ಕಾಗಿ BASLP ಕಾರ್ಯಕ್ರಮವನ್ನು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ವರ್ಗಾಯಿಸುವುದು ಸೂಕ್ತವೆಂದು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದರು. ಆದಾಗ್ಯೂ ಪ್ರಸ್ತುತ ಸಂದರ್ಭದಲ್ಲಿ Bachelor in Audiology and Speech Language Pathology (BASLP) ಕಾರ್ಯಕ್ರಮವನ್ನು ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಮುಂದುವರಿಸುವ ಬಗ್ಗೆ ಸರ್ಕಾರಕ್ಕೆ ಪತ್ರ ಬರೆಯಲು ಸಭೆಯು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ:ಶೈ.ಮ.ವಿ.ಸ.1:09 (2020–21)**

**ವಿಷಯ:** ಪದವಿ ಮಟ್ಟದ ಕಾರ್ಯಕ್ರಮಗಳಿಗೆ ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯಲ್ಲಿ ರಚಿಸಲಾದ ವಿನಿಮಯಕ್ಕೆ ತಿದ್ದುಪಡಿ ಮಾಡುವ ಬಗ್ಗೆ.

**ನಿರ್ಣಯ:** Alpha-sign grade ನ್ನು ನಮೂದಿಸಿ ತಿದ್ದುಪಡಿ ಮಾಡಿದ ವಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ:ಶೈ.ಮ.ವಿ.ಸ.1:10 (2020–21)**

**ವಿಷಯ:** ಪದವಿ ಮಟ್ಟದ ಪ್ರಥಮ ಸೆಮಿಸ್ಟರ್‌ನ ಕನ್ನಡ ಭಾಷೆ ಮತ್ತು ಕನ್ನಡದ ಕೋರ್ ಕೋರ್ಸು ಹಾಗೂ ತೃತೀಯ ಸೆಮಿಸ್ಟರ್ ಬಿ.ಬಿ.ಎ ಮತ್ತು ಬಿ.ಸಿ.ಎ ಕೋರ್ಸುಗಳ ಕನ್ನಡ ಭಾಷಾ ಪರಿಷ್ಕೃತ ಪಠ್ಯಕ್ರಮಗಳ ಬಗ್ಗೆ.

**ನಿರ್ಣಯ:** ಕಲಾ ನಿಕಾಯದ ಅನುಮೋದನೆಯನ್ನು ಪಡೆದುಕೊಳ್ಳುವ ಷರತ್ತಿನೊಂದಿಗೆ ಪರಿಷ್ಕೃತ ಪಠ್ಯಕ್ರಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ:ಶೈ.ಮ.ವಿ.ಸ.1:11 (2020–21)**

**ವಿಷಯ:** ಸರ್ಕಾರಿ ಶಿಕ್ಷಕ ಶಿಕ್ಷಣ ಮಹಾವಿದ್ಯಾಲಯ, ಮಂಗಳೂರು ಈ ವಿದ್ಯಾಸಂಸ್ಥೆಯನ್ನು ವಿಶ್ವವಿದ್ಯಾನಿಲಯದ ಘಟಕ ಕಾಲೇಜನ್ನಾಗಿ ಪರಿವರ್ತಿಸುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ:ಶೈ.ಮ.ವಿ.ಸ.1:12(2020–21)**

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ದೇಣಿಗೆ ಮತ್ತು ದತ್ತಿನಿಧಿ ಸ್ವೀಕಾರ ಮತ್ತು ನಿರ್ವಹಣೆಗೆ ಸಂಬಂಧಿಸಿದ ಪರಿನಿಯಮ ತಿದ್ದುಪಡಿ ಬಗ್ಗೆ.

**ನಿರ್ಣಯ:** ತಿದ್ದುಪಡಿ ಮಾಡಿದ ಪರಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ:ಶೈ.ಮ.ವಿ.ಸ.1:13 (2020–21)**

**ವಿಷಯ:** ಆಯ್ಕೆ ಆಧಾರಿತ ಶ್ರೇಯಾಂಕ ಪದ್ದತಿಯ ಬಿ.ಕಾಂ ಕಂಪ್ಯೂಟರ್ ಆಪ್ಲಿಕೇಶನ್ಸ್, ಬಿ.ಕಾಂ ಟ್ಯಾಕ್ಸ್ ಪ್ರೊಸಿಜರ್ ಆಂಡ್ ಪ್ರಾಕ್ಟೀಸ್ ಮತ್ತು ಬಿ.ಕಾಂ ಆಫೀಸ್ ಮ್ಯಾನೇಜ್‌ಮೆಂಟ್ & ಸೆಕ್ರೆಟರಿಯಲ್ ಪ್ರಾಕ್ಟೀಸ್ ವೊಕೇಶನಲ್ ಪದವಿ ಕೋರ್ಸುಗಳಿಗೆ ನಿರ್ದಿಷ್ಟ ಬಿ.ಕಾಂ ಪತ್ರಿಕೆಗಳನ್ನು ನಿಗದಿಪಡಿಸಿದ ಬಗ್ಗೆ.

**ನಿರ್ಣಯ:** ವಾಣಿಜ್ಯ ನಿಕಾಯದ ಅನುಮೋದನೆಯನ್ನು ಪಡೆದುಕೊಳ್ಳುವ ಷರತ್ತಿನೊಂದಿಗೆ ಪರಿಷ್ಕೃತ ಪರೀಕ್ಷಾ ಕಾರ್ಯಯೋಜನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಂಡಿಕೇಟ್:ಶೈ.ಮ.ವಿ.ಸ.1:14 (2020–21)**

**ವಿಷಯ:** ಕಾಸರಗೋಡು ಗಡಿನಾಡು ಕನ್ನಡಿಗರಿಗೆ ಎಲಿಜಿಬಿಲಿಟಿ ಸರ್ಟಿಫಿಕೇಟ್ ಶುಲ್ಕದಲ್ಲಿ ವಿನಾಯಿತಿ ನೀಡುವ ಕುರಿತು – ಪ್ರಾಂಶುಪಾಲರು, ಸರಕಾರಿ ಪ್ರಥಮ ದರ್ಜೆ ಕಾಲೇಜು, ಕನ್ಯಾನ ಶೈಕ್ಷಣಿಕ ಮಂಡಳಿ ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಂಡಿಕೇಟ್:ಶೈ.ಮ.ವಿ.ಸ.1:15 (2020–21)**

**ವಿಷಯ:** ಡಾ. ಕಿಶೋರ್ ಕುಮಾರ್ ಸಿ.ಕೆ, ಶೈಕ್ಷಣಿಕ ಮಂಡಳಿ ಸದಸ್ಯರು, ಇವರು ಸಲ್ಲಿಸಿರುವ ಗೊತ್ತುವಳಿಯ ಕುರಿತು.

**ನಿರ್ಣಯ:** ವಿಸ್ತೃತ ಚರ್ಚೆಯ ಬಳಿಕ ಎಲ್ಲಾ ನಿಕಾಯಗಳ ಜಂಟಿ ಸಭೆಯಲ್ಲಿ ಈ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸಿ ನಿರ್ಣಯ ಕೈಗೊಳ್ಳಬಹುದೆಂಬುದಾಗಿ ತೀರ್ಮಾನಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ:ಶೈ.ಮ.ವಿ.ಸ.1:16 (2020–21)**

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ICCM-2019 ಗೌರವಾರ್ಥ ದತ್ತಿ ಉಪನ್ಯಾಸ ನಿಧಿ ಸ್ಥಾಪಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ:ಶೈ.ಮ.ವಿ.ಸ.1:17 (2020–21)**

**ವಿಷಯ:** ಎಂ.ಸಿ.ಎ. ಕಾರ್ಯಕ್ರಮಕ್ಕೆ ಅಳವಡಿಸಲಾಗಿರುವ ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯಲ್ಲಿ ರಚಿಸಲಾದ ವಿನಿಯಮ ಮತ್ತು ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಅನುಮೋದನೆಯನ್ನು ಪಡೆದುಕೊಳ್ಳುವ ಷರತ್ತಿನೊಂದಿಗೆ AICTE ಸೂಚನೆಯ ಮೇರೆಗೆ ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯಂತೆ ರಚಿಸಲಾದ ವಿನಿಯಮ ಮತ್ತು ಪರಿಷ್ಕೃತ ಪಠ್ಯಕ್ರಮವನ್ನು ಅನುಮೋದಿಸಲಾಯಿತು.

- **ಇತರ ವಿಷಯಗಳು**

1. ಪ್ರಸ್ತಾವನೆಗಳಲ್ಲಿ ಕೆಲವೊಂದು ವಿಷಯಗಳಿಗೆ ಎಲ್ಲಾ ನಿಕಾಯಗಳ ಅಭಿಪ್ರಾಯ ಪಡೆಯಬೇಕಾಗಿರುವುದರಿಂದ ಶೀಘ್ರದಲ್ಲಿ ಎಲ್ಲಾ ನಿಕಾಯಗಳ ಜಂಟಿ ಸಭೆಯನ್ನು ನಡೆಸಲು ಕ್ರಮಕೈಗೊಳ್ಳಲು ನಿರ್ಣಯಿಸಲಾಯಿತು.

2. ಕುಲಸಚಿವರು(ಪ) ಇವರು ಈ ಕೆಳಗಿನ ಮಾಹಿತಿಗಳನ್ನು ಸಭೆಗೆ ತಿಳಿಸಿದರು.

- COVID-19 ರ ಈ ಸಂದರ್ಭದಲ್ಲಿ ವಿದ್ಯಾರ್ಥಿಗಳ ಭವಿಷ್ಯದ ಹಿತದೃಷ್ಟಿಯ ಬಗ್ಗೆ ಎಲ್ಲಾ ನಿಕಾಯಗಳ ಡೀನರುಗಳು, ಹಿರಿಯ ಪ್ರಾಧ್ಯಾಪಕರುಗಳು, ಪ್ರಾಂಶುಪಾಲರುಗಳೊಂದಿಗೆ ನಿರಂತರವಾಗಿ ಸಂಪರ್ಕಿಸಿ, ಹಲವಾರು ಸಭೆಗಳನ್ನು ನಡೆಸಿ, ಸರ್ಕಾರದ ನಿರ್ದೇಶನದಂತೆ ಸೆಪ್ಟೆಂಬರ್ 2020ರ ಅಂತ್ಯದೊಳಗಾಗಿ ಪದವಿ ಮತ್ತು ಸ್ನಾತಕೋತ್ತರ ಪರೀಕ್ಷೆಗಳನ್ನು ನಡೆಸಲಾಗುವುದೆಂದು ಸಭೆಗೆ ತಿಳಿಸಿದರು. ಆರನೇ ಸೆಮೆಸ್ಟರ್ ವಿದ್ಯಾರ್ಥಿಗಳಿಗೆ ಹಿಂದಿನ ಎಲ್ಲಾ ಸೆಮೆಸ್ಟರ್‌ಗಳ ಹಿಂಬಾಕಿ ಪತ್ರಿಕೆಗಳನ್ನು ಬರೆಯಲು ಅವಕಾಶ ಮಾಡಿಕೊಡಬೇಕಾಗಿ ಸರ್ಕಾರದ ನಿರ್ದೇಶನವಿರುವುದರಿಂದ ಪರೀಕ್ಷಾ ವೇಳಾಪಟ್ಟಿಯನ್ನು ವಿಸ್ತರಿಸಬೇಕಾಗುತ್ತದೆ ಎಂಬ ಮಾಹಿತಿಯನ್ನು ಸಭೆಗೆ ತಿಳಿಸಿದರು.
- ಎರಡು ಮತ್ತು ನಾಲ್ಕನೇ ಸೆಮೆಸ್ಟರ್ ವಿದ್ಯಾರ್ಥಿಗಳಿಗೆ ಹಿಂದಿನ ಸೆಮೆಸ್ಟರ್‌ನಲ್ಲಿ ಪಡೆದಿರುವ ಅಂಕಗಳ ಮತ್ತು ಆಂತರಿಕ ಅಂಕಗಳ ಆಧಾರದ ಮೇಲೆ ಅಂಕಗಳನ್ನು ಲೆಕ್ಕಾಚಾರ ಮಾಡಿ ಫಲಿತಾಂಶ ನೀಡಲಾಗುವುದು ಎಂದು ಸಭೆಗೆ ತಿಳಿಸಿದರು.
- ಡಿಜಿಟಲ್ ಮೌಲ್ಯಮಾಪನಕ್ಕೆ ಹೆಚ್ಚಿನ ಆದ್ಯತೆ ನೀಡುವುದಾಗಿಯೂ ತಿಳಿಸಿದರು.
- ಈ ಸಂದರ್ಭದಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿಯ ಭವಿಷ್ಯದ ಬಗ್ಗೆ ಕಾಳಜಿ ವಹಿಸಿ ವಿದ್ಯಾರ್ಥಿ ಸ್ನೇಹಿ ಆಡಳಿತ ನಡೆಸುವುದಾಗಿ ತಿಳಿಸಿದರು.
- ವಸತಿನಿಲಯಗಳನ್ನು ತೆರವುಗೊಳಿಸುವಂತೆ ಕೋರಿ ಈಗಾಗಲೇ ಮಾನ್ಯ ಜಿಲ್ಲಾಧಿಕಾರಿಯವರಿಗೆ ಪತ್ರ ಬರೆದಿರುವುದಾಗಿ ತಿಳಿಸಿದರು.
- ಹೊರರಾಜ್ಯದ, ಹೊರ ದೇಶದ ವಿದ್ಯಾರ್ಥಿಗಳಿಗೆ ಅವರ ಊರಿನಲ್ಲೇ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸುವುದಾಗಿ ತಿಳಿಸಿದರು.

ಕುಲಸಚಿವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಸಹಿ/– | ಸಹಿ/– |
| ಕುಲಸಚಿವರು | ಕುಲಪತಿಗಳು. |